# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆರಡನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ:28ನೇ ಫೆಬ್ರವರಿ, 2024**

**(ಸಮಯ: ಬೆಳಗ್ಗೆ: 09.30 ಗಂಟೆಗೆ)**

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಕಾರ್ಯದರ್ಶಿಯವರು ಈ ಕೆಳಕಂಡ ವಿಧೇಯಕಗಳನ್ನು ಮಂಡಿಸುವುದು**

01. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ತಿದ್ದುಪಡಿ) ವಿಧೇಯಕ, 2024

02 ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2024

## 02. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01. ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾ ರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
**ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಶ್ರೀ ಹುಲಿಗೆಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ, 2024
**ಶ್ರೀ ಎಚ್.ಕೆ. ಪಾಟೀಲ (ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2024
**ಶ್ರೀ ಕೃಷ್ಣ ಬೈರೇಗೌಡ (ಮಾನ್ಯ ಕಂದಾಯ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 03. ವಿತ್ತೀಯ ಕಾರ್ಯಕಲಾಪ

2024-25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ರಘುನಾಥ್ ರಾವ್ ಮಲ್ಕಾಪೂರೆ, ಎಂ.ಎಲ್. ಅನಿಲ್ ಕುಮಾರ್, ದಿನೇಶ್ ಗೂಳಿಗೌಡ, ಸುನೀಲ್ ವಲ್ಯಾಪುರ್, ಮರಿತಿಬ್ಬೇಗೌಡ ಹಾಗೂ ಇತರರು** ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಸುಂಕದಕಟ್ಟೆ ಗ್ರಾಮದ ಸರ್ವೆ ನಂ.37 ಮತ್ತು ನೆಟ್ಟಿಗೆರೆ ಗ್ರಾಮದ ಸರ್ವೆ ನಂ.42ಕ್ಕೆ ಸಂಬಂಧಿಸಿದಂತೆ ಪೋಡಿ ದುರಸ್ಥಿ ಬಗ್ಗೆ ಸ್ಥಳೀಯ ಅರಣ್ಯ ವ್ಯವಸ್ಥಾಪನಾ ಅಧಿಕಾರಿಗಳು ವಿಚಾರಣೆ ನಡೆಸಿ, ಆದೇಶ ಹೊರಡಿಸಲಾಗಿದ್ದರೂ ಅಂದಿನ ಎ.ಸಿ.ಎಫ್. ಅವರು ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ವಿನಾಕಾರಣ ಕಿರುಕುಳ ನೀಡುತ್ತಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

೦೨. **ಶ್ರೀ ಬಿ.ಎಂ. ಫಾರೂಖ್** ಅವರು ತುಳು ಭಾಷೆಯನ್ನು ಕರ್ನಾಟಕ ರಾಜ್ಯದ ಎರಡನೇ ಭಾಷೆಯನ್ನಾಗಿ ಘೋಷಿಸಿ ಭಾರತ ಸಂವಿಧಾನದ 8ನೇ ಪರಿಚ್ಛೇದದಲ್ಲಿ ಸೇರ್ಪಡೆ ಮಾಡುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

೦೩. **ಶ್ರೀ ಎಸ್. ರವಿ** ಅವರು ಬೆಂಗಳೂರು ನಗರದ ಬನಶಂಕರಿಯಿಂದ ತಲಘಟ್ಟಪುರದವರೆಗೆ ವಾಹನಗಳ ದಟ್ಟಣೆ ಹೆಚ್ಚಾಗಿರುವ ಕಾರಣ ಸದರಿ ರಸ್ತೆಯಲ್ಲಿ ಪ್ರಯಾಣಿಕರ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಫ್ಲೈ ಓವರ್ ನಿರ್ಮಾಣ ಅಥವಾ ಬೇರೆ ಯಾವುದಾದರೂ ಯೋಜನೆಯನ್ನು ರೂಪಿಸುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೪. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯಲ್ಲಿ ಖಾಸಗಿ ಆಸ್ಪತ್ರೆಯ ಆಡಳಿತ ಮಂಡಳಿಗಳು ಸರ್ಕಾರದ 108 ಆಂಬುಲೆನ್ಸ್ ಚಾಲಕರುಗಳಿಗೆ ಆಮಿಷವೊಡ್ಡಿ ರೋಗಿಗಳನ್ನು ಸರ್ಕಾರಿ ಆಸ್ಪತ್ರೆಗಳ ಬದಲು ಖಾಸಗಿ ಆಸ್ಪತ್ರೆಗಳಿಗೆ ದಾಖಲು ಮಾಡುತ್ತಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦೫. **ಡಾ:ತಳವಾರ್ ಸಾಬಣ್ಣ** ಅವರು ಭಾರತ ಸಂವಿಧಾನದ 315ನೇ ಅನುಚ್ಛೇದದ ಅಡಿಯಲ್ಲಿ ರಚಿತವಾದ ಕರ್ನಾಟಕ ಲೋಕ ಸೇವಾ ಆಯೋಗದ ಅಧ್ಯಕ್ಷರು/ಸದಸ್ಯರುಗಳು ಮತ್ತು ಕಾರ್ಯದರ್ಶಿಗಳ ನಡುವಿನ ಅಧಿಕಾರ ಚಲಾವಣೆಯಲ್ಲಿನ ಗೊಂದಲದ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

೦೬. **ಶ್ರೀ ಸಿ.ಎನ್. ಮಂಜೇಗೌಡ** ಅವರು ಮೈಸೂರು ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ತೆರೆಯುವ ಕುರಿತು ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

೦೭. **ಶ್ರೀ ಎನ್. ರವಿಕುಮಾರ್** ಅವರು ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕಲ್ಯಾ ಪಂಚಾಯತಿ ವ್ಯಾಪ್ತಿಯ ಹುಜಗಲ್‌ನ ಕಾಡಿನಲ್ಲಿ ವಾಸ ಮಾಡುತ್ತಿರುವ ಇರಳಿಗ ಸಮುದಾಯದವರಿಗೆ ಹಕ್ಕುಪತ್ರ ನೀಡಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

೦೮. **ಶ್ರೀ ಸುನೀಲ್ ವಲ್ಯಾಪುರ್** ಅವರು ಬೆಂಗಳೂರು ನಗರದ ಯಡಿಯೂರು ಕೊಳಚೆ ನಿರ್ಮೂಲನಾ ಪ್ರದೇಶದಲ್ಲಿ ನೋಟಿಸ್ ನೀಡದೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಮನೆ ಕೆಡವಿರುವ ಹಾಗೂ ಕಲಬುರಗಿ ನಗರದ ನಗರಾಭಿವೃದ್ಧಿ ಪ್ರಾಧಿಕಾರ ಬಡಾವಣೆಯ ಸುನೀಲ ನಗರದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಹಕ್ಕುಪತ್ರ ನೀಡುವ ಕುರಿತು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯುವುದು.

೦೯. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

.4..

## 05. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ಅಧ್ಯಕ್ಷ/ಉಪಾಧ್ಯಕ್ಷ ಮೀಸಲಾತಿ ಬಗ್ಗೆ ದಿನಾಂಕ:13.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:01(60)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಂ.ಎಲ್. ಅನಿಲ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಶನಿವಾರ ಸಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಐದು ದಶಕಗಳಿಂದ ಪ್ಲಾಸ್ಟಿಕ್ ಗುಡಿಸಲಿನಲ್ಲಿ ವಾಸ ಮಾಡುತ್ತಿರುವ ಹಾವಾಡಿಗ ಜನಾಂಗದ ಬಗ್ಗೆ ದಿನಾಂಕ:14.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:26(103)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಇ. ಕೃಷ್ಣಾ ಮೇಲ್ದಂಡೆ ಯೋಜನೆ ಬಗ್ಗೆ ದಿನಾಂಕ:22.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:102 (866)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪಿ.ಹೆಚ್. ಪೂಜಾರ್ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಈ. ಎಸ್‌ಸಿಎಸ್‌ಪಿ/ಟಿಎಸ್‌ಪಿ ಹಣವನ್ನು ಅನ್ಯಯೋಜನೆಗಳಿಗೆ ಬಳಕೆ ಮಾಡಿರುವ ಬಗ್ಗೆ ದಿನಾಂಕ:23.02.2024ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:117(1056)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**